# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ:25-07-2017ರಂದು ಮಧ್ಯಾಹ್ನ 3.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | - ಅಧ್ಯಕ್ಷರು | ಉಪ ನಿಯಂತ್ರಕರು(ಹಣಕಾಸು) |
| 2. | ಸವಿತಾ ವಿ.ಕೃಷ್ಣ | - ಸದಸ್ಯರು | ಸಂಬಂಧಪಟ್ಟ ಕಂದಾಯಾಧಿಕಾರಿಗಳು |
| 3. | ಎನ್.ಉಮಾ | - ಸದಸ್ಯರು | ಎಲ್ಲಾ ಸಹ ಕಂದಾಯ ಅಧಿಕಾರಿಗಳು |
| 4. | ರಾಧಮ್ಮ ವೆಂಕಟೇಶ್ | - ಸದಸ್ಯರು | |
| 5. | ಜಿ.ಬಾಲಕೃಷ್ಣನ್ | - ಸದಸ್ಯರು | |
| 6. | ವಿ.ಸುರೇಶ್ | - ಸದಸ್ಯರು | |
| 7. | ಹೆಚ್.ಕುಸುಮಾ | - ಸದಸ್ಯರು | |
| 8. | ಎಂ.ಮಾಲತಿ | - ಸದಸ್ಯರು | |
| 9. | ಎಂ.ಶಾಮಲ | - ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | - ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | - ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಈ ಹಿಂದೆ ದಿನಾಂಕ:30-11-2016ರಂದು ಆರ್.ಆರ್.ನಗರ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಸಭೆ ನಡೆಸಿ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತ, ಹಾಗೂ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ಮತ್ತು ಈ ಕುರಿತು ತಿಂಗಳಿಗೊಮ್ಮೆ ಸಭೆ ನಡೆಸಿ ಸಭೆಯ ನಡವಳಿಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸಲಾಗಿದ್ದು, ಲೆಕ್ಕಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಎಷ್ಟು ಸಭೆಗಳನ್ನು ನಡೆಸಿ, ಯಾವ ಯಾವ ಕ್ರಮವನ್ನು ಕೈಗೊಳ್ಳಲಾಗಿರುತ್ತದೆ ಎಂಬುದರ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದರು.

ಆಗ ಹಾಜರಿದ್ದ ಕಂದಾಯ ಅಧಿಕಾರಿ (ಆರ್.ಆರ್.ನಗರ ಮತ್ತು ಯಶವಂತಪುರ) ರವರು ಪ್ರತಿವಾರ ಸಹ ಕಂದಾಯ ಅಧಿಕಾರಿಗಳ ಕಛೇರಿಗಳಿಗೆ ಭೇಟಿ ನೀಡಿ ಇತರೆ ವಿಷಯಗಳ ಜೊತೆಗೆ ಲೆಕ್ಕಪರಿಶೋಧನಾ ವರದಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ಬಗ್ಗೆ ಖುದ್ದಾಗಿ ಚರ್ಚಿಸಿ ಪರಿಶೀಲನೆ ನಡೆಸುತ್ತಿರುವುದಾಗಿ ಹಾಗೂ ಈ ಬಗ್ಗೆ ಅಗತ್ಯ ಸೂಚನೆಗಳನ್ನು ನೀಡುತ್ತಿರುವುದಾಗಿ ಸಭೆಗೆ ಮಾಹಿತಿ ನೀಡಿದರು.

ನಂತರ ಅಧ್ಯಕ್ಷರು ಹಾಜರಿದ್ದ ಸಹ ಕಂದಾಯ ಅಧಿಕಾರಿ, ಹೇರೊಹಳ್ಳಿ ಉಪವಿಭಾಗ ಕಛೇರಿಗೆ ಸಂಬಂಧಿಸಿದಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ವಸೂಲಾತಿ ಮತ್ತು ಅಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ಮಾಹಿತಿಯನ್ನು ನೀಡಲು ಸೂಚಿಸಿದಾಗ, ಸದರಿಯವರು ತಾವು 3 ತಿಂಗಳ ಹಿಂದೆಯಷ್ಟೆ ಕಛೇರಿಗೆ ವರ್ಗಾವಣೆಯಾಗಿ ಬಂದಿದ್ದು, ಕಾಲಾವಕಾಶ ನೀಡಬೇಕೆಂದು ಕೋರಿದರು. ಆಗ ಅಧ್ಯಕ್ಷರು ಈ ಬಗ್ಗೆ ಅಗತ್ಯ ಕ್ರಮ ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದರು. ಅದರಂತೆ ಸಹ ಕಂದಾಯ ಅದಿಕಾರಿ (ಆರ್.ಆರ್.ನಗರ) ರವರು ಕೂಡ ತಾವು ಸಹ 3 ತಿಂಗಳ ಹಿಂದೆಯಷ್ಟೆ ಕಛೇರಿಗೆ ವರ್ಗಾವಣೆಯಾಗಿ ಬಂದಿದ್ದು, ಈ ಬಗ್ಗೆ ಸಮರ್ಪಕವಾಗಿ ಕಡತಗಳನ್ನು ನಿರ್ವಹಣೆ ಮಾಡಿರುವುದಿಲ್ಲವೆಂದು, ಆಡಿಟ್ ಸೆಲ್ ಕಛೇರಿಯಿಂದ ಮಾಹಿತಿಯನ್ನು ಪಡೆದುಕೊಂಡು ಅಗತ್ಯ ಕ್ರಮ ಕೈಗೊಳ್ಳಲು ಕಾಲಾವಕಾಶವನ್ನು ಕೋರಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ಎಷ್ಟು ಸ್ವತ್ತುಗಳನ್ನು ನಮೂದಿಸಲಾಗಿರುತ್ತದೆ, ಎಷ್ಟು ತೆರಿಗೆಯನ್ನು ಸಂಗ್ರಹಿಸಲಾಗಿರುತ್ತದೆ, ಬಾಕಿ ತೆರಿಗೆ ಪಾವತಿಸಬೇಕಾದ ಸ್ವತ್ತುಗಳ ವಿವರ, ಎಷ್ಟು ಸ್ವತ್ತುಗಳನ್ನು ತಪಾಸಣೆ ಮಾಡಲಾಗಿದೆ ಎಂಬ ವಿವರಗಳನ್ನು ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಅಧಿಕಾರಿಗಳು ತಮ್ಮ ಉಪವಿಭಾಗಗಳಿಗೆ ಸಂಬಂಧಿಸಿದಂತೆ ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ನೊಂದಾವಣೆ ಆಗಿರುವ ಸ್ವತ್ತುಗಳ ಅಂಕಿಅಂಶಗಳ ವಿವರಗಳನ್ನು ನೀಡಿದರು. ಅಲ್ಲದೆ ಎಸ್.ಎ.ಎಸ್.ಯೋಜನೆ ಅಡಿಯಲ್ಲಿ ನೋಂದಾವಣೆ ಆಗಿರುವ ಸ್ವತ್ತುಗಳನ್ನು ಪತ್ತೆ ಹಚ್ಚಿ, ತಪಾಸಣೆ ಮಾಡಿ, ಅಳತೆಯನ್ನು ತಪ್ಪಾಗಿ ನಮೂದಿಸಿರುವ ಸ್ವತ್ತುಗಳ ಮಾಲೀಕರುಗಳಿಗೆ ಬಾಕಿ ತೆರಿಗೆಯನ್ನು ಪಾವತಿಸುವಂತೆ ನೋಟೀಸ್ ಜಾರಿ ಮಾಡಿ ಅಗತ್ಯ ಕ್ರಮ ಕೈಗೊಳ್ಳುತ್ತಿರುವುದಾಗಿಯು ತಿಳಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್‌ಕುಮಾರ್ ರವರು ಮಾತನಾಡುತ್ತಾ ಬಿ ರಿಜಿಸ್ಟರ್‌ನಲ್ಲಿ ನಮೂದಾಗಿರುವ ಒಟ್ಟು ಸ್ವತ್ತುಗಳ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಎಷ್ಟು ಸ್ವತ್ತುಗಳಿಗೆ ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ, ಅನಧಿಕೃತವಾಗಿ ಎಷ್ಟು ಕಟ್ಟಡಗಳು ನಿರ್ಮಾಣ ಆಗಿರುತ್ತವೆ,

ನಿಯಮಾನುಸಾರ ಪ್ರತಿದಿನ ಕನಿಷ್ಠ 45 ಸ್ವತ್ತುಗಳನ್ನು ತಪಾಸಣೆ ಮಾಡಬೇಕೆಂಬ ನಿಯಮವಿದ್ದು, ಈ ಬಗ್ಗೆ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ನೀಡಲು ಸೂಚಿಸಿದಾಗ, ಹಾಜರಿದ್ದ ಅಧಿಕಾರಿಗಳು ಬಿ ವಹಿಯಲ್ಲಿ ನೊಂದಾವಣೆಯಾಗಿರುವ ಸ್ವತ್ತುಗಳಿಂದ ತೆರಿಗೆಯನ್ನು ವಸೂಲು ಮಾಡುತ್ತಿರುವುದಾಗಿ ಹಾಗೂ ಪ್ರತಿದಿನ ಎಸ್.ಎ.ಎಸ್ ಯೋಜನೆಅಡಿಯಲ್ಲಿ ನೊಂದಾವಣೆ ಆಗಿರುವ ಸ್ವತ್ತುಗಳ ತಪಾಸಣೆಯನ್ನು ಮಾಡಲು ಕಂದಾಯ ಪರಿವೀಕ್ಷಕರುಗಳಿಗೆ ಸೂಚನೆ ನೀಡಿದ್ದು, ಸದರಿಯವರುಗಳು ಪ್ರತಿದಿನ ಈ ಬಗ್ಗೆ ವರದಿ ಸಲ್ಲಿಸುತ್ತಿರುವುದಾಗಿ ಹಾಜರಿದ್ದ ಸಹ ಕಂದಾಯ ಅಧಿಕಾರಿಗಳು ಮಾಹಿತಿ ನೀಡಿದರು. ಆಗ ಸದಸ್ಯರು ಎಲ್ಲಾ ಸಹ ಕಂದಾಯ ಅಧಿಕಾರಿಗಳೂ ತಮ್ಮ ಕಛೇರಿಯಲ್ಲಿ ನಿರ್ವಹಿಸುತ್ತಿರುವ **ಬಿ ವಹಿಯನ್ನು** ಸಂಪೂರ್ಣ ವರದಿಯೊಂದಿಗೆ ಸಮಿತಿಗೆ ಮುಂದಿನ ವಾರದಲ್ಲಿ ಪರಿಶೀಲನೆಗೆ ಸಲ್ಲಿಸಲು ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಅಧಿಕಾರಿಗಳು ಲೆಕ್ಕಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಅಗತ್ಯ ಕ್ರಮವನ್ನು ಕೈಗೊಳ್ಳುವಲ್ಲಿ ನಿರ್ಲಕ್ಷ್ಯತನ ತೋರುತ್ತಿದ್ದು, ಪಾಲಿಕೆಗೆ ಆದಾಯದ ಮೂಲದಲ್ಲಿ ಇದು ಒಂದಾಗಿದ್ದು, ಇನ್ನು ಮುಂದೆ ಅಧಿಕಾರಿ/ನೌಕರರು ಯಾವುದೇ ನಿರ್ಲಕ್ಷ್ಯತನ ತೋರದೆ ಬಾಕಿ ಇರುವ ಕಂಡಿಕೆಗಳು, ವಸೂಲಾತಿ ಮತ್ತು ಆಕ್ಷೇಪಣೆಗಳಿಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸುತ್ತಾ, ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**
1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಜಂಟಿ ಆಯುಕ್ತರು (ಆರ್.ಆರ್.ನಗರ) ರವರಿಗೆ ಅಗತ್ಯ ಕ್ರಮಕ್ಕಾಗಿ
6.ಉಪ ಆಯುಕ್ತರು (ಆರ್.ಆರ್.ನಗರ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
7.ಕಂದಾಯಾಧಿಕಾರಿ (ಯಶವಂತಪುರ, ಆರ್.ಆರ್.ನಗರ ಮತ್ತು ಕೆಂಗೇರಿ) ರವರುಗಳಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ.
8.ಮುಖ್ಯ ಲೆಕ್ಕಾಧಿಕಾರಿ ಯವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
9.ಕಛೇರಿ ಕಡತಕ್ಕೆ